ದಿನಾಂಕಃ **13-08-2025** ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀ ಆರ್ ಸಿ ವಕೀಲರಿಂದಃ

ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಸಲ್ಲಿಸಿರುವ ಅಂಶಗಳನ್ನು ನಾನು ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಹೇಳಿರುವ ಅಂಶಗಳೆಲ್ಲಾ ಸತ್ಯವಾಗಿರುತ್ತದೆ ಹಾಗೂ ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ಈ ಕೆಳಗಿನ ದಾಖಲಾತಿಗಳನ್ನು ಹಾಜರು ಮಾಡುತ್ತಿದ್ದು ಸದರಿ ದಾಖಲೆಗಳನ್ನು ನಿಶಾನೆಗಳಾಗಿ ಗುರುತಿಸಿಕೊಳ್ಳಲು ಕೋರುತ್ತೇನೆ.

1. ದಾವಾ ಸ್ವತ್ತಿಗೆ ಸಂಬಂಧಪಟ್ಟಿರುವ ವಾದಿಯ ತಂದೆಯ ಮರಣ ಪ್ರಮಾಣಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.
ಸರ್ವೆ ನಂ.2/2 ರ ಪಹಣಿಯನ್ನು ನಿಪಿ-2 ಎಂದು ಗುರುತಿಸಲಾಯಿತು.
ಸರ್ವೆ ನಂ. 18/2 ರ ಕೈ ಬರಹದ ಧೃಡಿಕೃತ ಪಹಣಿಯನ್ನು ನಿಪಿ-3 ಎಂದು ಗುರುತಿಸಲಾಯಿತು.
ಸರ್ವೆ ನಂ,8/6 ರ ಪಹಣಿಯನ್ನು ನಿಪಿ-4 ಎಂದು ಗುರುತಿಸಲಾಯಿತು.
ಸರ್ವೆ ನಂ, 35/1 ರ ಪಹಣಿಯನ್ನು ನಿಪಿ-5 ಎಂದು ಗುರುತಿಸಲಾಯಿತು.
ದಿಃ25-11-2024 ರ ತಿಳುವಳಿಕೆಪತ್ರ ವನ್ನು ನಿಪಿ6 ಎಂದು
ಅಂಚೆ ಸ್ವೀಕೃತಿಯನ್ನು ನಿಪಿ.7 ಎಂದು , ಅದರಲ್ಲಿನ ಪ್ರತಿವಾದಿಯ ಸಹಿಯನ್ನು ನಿಪಿ.7(ಎ) ಎಂದು,
ಅಂಚೆ ರಸೀದಿಯನ್ನು ನಿಪಿ.8 ಎಂದು ಗುರುತಿಸಲಾಯಿತು.
ಎರಡು ಅಂಚೆ ಲಕೋಟೆಗಳನ್ನು ನಿಪಿ.9 ಮತ್ತು 10 ಎಂದು ಹಾಗೂ ಅದರಲ್ಲಿನ ನೋಟೀಸುಗಳನ್ನು ನಿಪಿ.9(ಎ) ಮತ್ತು 10(ಎ) ಎಂದು ಗುರುತಿಸಲಾಯಿತು.
ಕಂದಾಯ ಪಪಿಾವತಿ ರಸೀದಿಯನ್ನು ನಿಪಿ.11 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ವಾದಿಪರ ವಕೀಲರು ಕಾಲಾವಕಾಶವನ್ನು ಕೋರಿದ್ದು ಕೋರಿಕೆ ಮೇರೆಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಿಸಿ ಓದಿ ಹೇಳಿ, ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.)

ಅಧಿಕ ಸಿವಿಲ್ ನ್ಯಾಯಾಧೀಶರು
ತಿಪಟೂರು.